## ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್. ವೃತ್ತ, ಬೆಂಗಳೂರು 01

ಸಂಖ್ಯೆ: ಸಿ8(1) ಪಾಶಿಇ ನೋಂ.ಪ್ರೌ.ಶಾಲೆ 58/2004-05 ದಿನಾಂಕ: 30ನೇ ಏಪ್ರಿಲ್ 2004

### ನಮೂನೆ-2

### (ನಿಯಮ 3 ಉಪನಿಯಮ 5(ಬಿ))

### ಪ್ರಮಾಣ ಪತ್ರ ಸಂಖ್ಯೆ: 171/2004-05

ಪ್ರಮತಿ ಎಜುಕೇಷನ್ ಅಂಡ್ ಕಲ್ಚರಲ್ ಟ್ರಸ್ಟ್, ಸಿ.ಎ. 2 ಉದಯರವಿ ರಸ್ತೆ, ಕುವೆಂಪು ನಗರ, ಮೈಸೂರು ಇವರ ಗವರ್ನಿಂಗ್ ಕೌನ್ಸಿಲ್‌ಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1995) ಸೆಕ್ಷನ್ 31 ರಂತೆ ಈ ದಿನ ಎರಡು ಸಾವಿರದ ನಾಲ್ಕರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. ಕ್ರಮ ಸಂಖ್ಯೆ | : | 171/2004-05 |
| 2. ಶಾಲೆಯ ಹೆಸರು ಮತ್ತು ವಿಳಾಸ | : | ಪ್ರಮತಿ ಪ್ರೌಢಶಾಲೆ, ಸಿ.ಎ. 2 ಜೆ.ಟಿ. ಲೇಔಟ್, 3ನೇ ಕ್ರಾಸ್, ಉದಯರವಿ ರಸ್ತೆ, ಕುವೆಂಪು ನಗರ, ಮೈಸೂರು |
| 3. ಅನುಮತಿ ನೀಡಿದ ತರಗತಿ | : | 8ನೇ ತರಗತಿ |
| 4. ಪ್ರಾರಂಭಿಸಬೇಕಾದ ತರಗತಿಗಳು | : | 8ನೇ ತರಗತಿ 9ನೇ ತರಗತಿ 10ನೇ ತರಗತಿ |
| ಹಾಗೂ ಶೈಕ್ಷಣಿಕ ವರ್ಷ | : | 2004-2005 2005-06 2006-07 |
| 5. ಅನುಮತಿ ನೀಡಿದ ಮಾಧ್ಯಮ | : | ಆಂಗ್ಲ ಮಾಧ್ಯಮ |
| 6. ಶುಲ್ಕ ಪಾವತಿ ಮಾಡಿರುವುದು | : | ರೂ. 10,000-00 ಪಾವತಿ ಮಾಡಿರುತ್ತಾರೆ ಡಿ.ಡಿ.ಸಂಖ್ಯೆ : 986456, ದಿನಾಂಕ:13-11-03 |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 171, ಪುಟಸಂಖ್ಯೆ: 171, ವಾಲ್ಯೂಂ ಸಂಖ್ಯೆ: 05 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ.

1. ಈ ನೋಂದಾವಣೆಯು ನಿಯಮ 3(5)(4) ಕ್ಕೆ ಒಳಪಟ್ಟಿರುತ್ತದೆ.

2. ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

ನಿರ್ದೇಶಕರು (ಪ್ರೌಢ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ

5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.

7. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್ ಸಂಖ್ಯೆ: 1-96) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.

8. ಈ ಪ್ರೌಢಶಾಲಾ ನೋಂದಾವಣೆಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 175 ಕೆಪಿಎಂಸಿ 95, ದಿನಾಂಕ: 7-9-98 ಮತ್ತು ದಿನಾಂಕ: 29-12-98ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ 10-00ರ ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು) ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

10. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

11. ಶಾಲೆ ಪ್ರಾರಂಭಿಸಿದ ಎರಡು ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಸಂಬಂಧಿಸಿದ ಉಪ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ದಾಖಲಾತಿ 30 ಹಾಗೂ ಗರಿಷ್ಠ ದಾಖಲಾತಿ 60 ಮತ್ತು ಹಾಜರಾತಿ ಕನಿಷ್ಠ 25 ಇರತಕ್ಕದ್ದು.

13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

14. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39 ರಂತೆ ನೋಂದಾಯಿಸಿದ ಎಲ್ಲಾ ಶಾಲೆಗಳು ರೆಕಗ್ನೀಷನ್ ಹಾಗೂ ಪ್ರಾವಿಷನಲ್ ರೆಕಗ್ನೀಷನ್ ವ್ಯಾಪ್ತಿಗೆ ಬರುವುದು.

15. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

16. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

17. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಬೋಧನೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು, ಇಲ್ಲವಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

18. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.

19. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

20. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

21. ಶಾಲೆಯಲ್ಲಿ ನೇಮಕ ಮಾಡಿಕೊಳ್ಳುವ ಪ್ರತಿಯೊಬ್ಬ ಬೋಧಕ / ಬೋಧಕೇತರ ಸಿಬ್ಬಂದಿಗೂ ಕರ್ನಾಟಕ ನಾಗರೀಕ ಸೇವಾ ನಿಯಮದ ಪ್ರಕಾರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ದಾಖಲಿಸಿ ನಿರ್ವಹಿಸುವುದು.

ಸ್ಥಳ: ಬೆಂಗಳೂರು
ದಿನಾಂಕ: 30-4-2004

ನಿರ್ದೇಶಕರು (ಪ್ರೌಢ ಶಿಕ್ಷಣ)
ಹಾಗೂ ನೋಂದಣಿ ಅಧಿಕಾರಿ.
ಸಾರ್ವಜನಿಕ ಶಿಕ್ಷಣ ಇಲಾಖೆ,

ಗೆ:
ಕಾರ್ಯದರ್ಶಿಗಳು,
ಪ್ರಮತಿ ಎಜುಕೇಷನ್ ಅಂಡ್ ಕಲ್ಚರಲ್ ಟ್ರಸ್ಟ್,
ಸಿ.ಎ.2, ಆದಿಚುಂಚನಗಿರಿ ರಸ್ತೆ,
ಕುವೆಂಪು ನಗರ, ಮೈಸೂರು

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, 3ನೇ ಮಹಡಿ, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು
3. ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಮೈಸೂರು
4. ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು
5. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ದಕ್ಷಿಣ ವಲಯ
6. ಜ್ಞಾಪನ ಕಡತ,
7. ಕಛೇರಿ ಪ್ರತಿ.

*\\Type6\est 2\1227_04.doc*